# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 587
2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 24.09.2020
4. ಉತ್ತರಿಸುವ ಸಚಿವರು : ಮಾನ್ಯ ಗೃಹ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಡ್ರಗ್ಸ್ ಮಾರಾಟದ ದಂಧೆ ರಾಜಾರೋಷವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಡ್ರಗ್ಸ್ ಮಾರಾಟ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ | ಡ್ರಗ್ಸ್ ಮಾರಾಟದಲ್ಲಿ ಅನೇಕ ಸಲೆಬ್ರಿಟಿಗಳು ಭಾಗಿಯಾಗಿರುವುದು ನಿಜವೇ: (ಪೂರ್ಣ ಮಾಹಿತಿಯನ್ನು ಒದಗಿಸುವುದು) | ಬೆಂಗಳೂರು ನಗರವನ್ನು ಹೊರತು ಪಡಿಸಿದರೆ, ರಾಜ್ಯದ ಇತರೇ ಯಾವುದೇ ಪ್ರದೇಶಗಳಲ್ಲಿ ಸೆಲೆಬ್ರಿಟಿಗಳು ಡ್ರಗ್ಸ್ ಜಾಲದಲ್ಲಿ ಭಾಗಿಯಾಗಿರುವ ಬಗ್ಗೆ ವರದಿಯಾಗಿರುವುದಿಲ್ಲ.<br>ಬೆಂಗಳೂರು ನಗರದಲ್ಲಿ ಕೆಲವು ಸೆಲೆಬ್ರಿಟಿಗಳು ಡ್ರಗ್ಸ್ ಜಾಲದಲ್ಲಿ ಭಾಗಿಯಾಗಿರುವುದು ಕಂಡುಬಂದಿರುತ್ತದೆ. ಈ ಬಗ್ಗೆ **ಕಾಟನ್‌ಪೇಟೆ ಪೊಲೀಸ್ ಠಾಣೆ ಮೊ.ಸಂ: 109/2020** ಕಲಂ: 21, 21(ಸಿ), 27(ಬಿ), 29 ಎನ್.ಡಿ.ಪಿ.ಎಸ್ ಆಕ್ಟ್ ರೀತ್ಯಾ ಪ್ರಕರಣವನ್ನು ದಾಖಲಿಸಲಾಗಿರುತ್ತದೆ.<br>ಬೆಂಗಳೂರು ನಗರದ ಸಿಸಿಬಿ ಘಟಕವು ಈ ಪ್ರಕರಣದ ತನಿಖೆಯನ್ನು ನಡೆಸುತ್ತಿದ್ದು, ಸೆಲೆಬ್ರಿಟಿಗಳ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದೆ. ಈವರೆಗೆ ಈ ಪ್ರಕರಣದಲ್ಲಿ **11 ಜನ ಆರೋಪಿಗಳನ್ನು ದಸ್ತಗಿರಿ** ಮಾಡಲಾಗಿರುತ್ತದೆ.<br>ಪ್ರಸ್ತುತ ಪ್ರಕರಣವು ತನಿಖಾ ಹಂತದಲ್ಲಿರುತ್ತದೆ. |
| ಇ | ಡ್ರಗ್ಸ್ ಮಾರಾಟಕ್ಕೆ ಕಡಿವಾಣ ಹಾಕಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ರಾಜ್ಯದಲ್ಲಿ ಮಾದಕ ಪದಾರ್ಥಗಳ ಮಾರಾಟ, ಸಾಗಣೆ ಮತ್ತು ಸೇವನೆಯನ್ನು ತಡೆಗಟ್ಟಲು ಸರ್ಕಾರವು ಕೈಗೊಂಡಿರುವ ಕ್ರಮಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |

ಒಇ 19 ಪಿಎನ್‌ಡಿ 2020

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು

## ಅನುಬಂಧ

**ರಾಜ್ಯದಲ್ಲಿ ಮಾದಕ ಪದಾರ್ಥಗಳ ಮಾರಾಟ, ಸಾಗಣೆ ಮತ್ತು ಸೇವನೆಯನ್ನು ತಡೆಗಟ್ಟಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ:**

- ರಾಜ್ಯದಲ್ಲಿ ಮಾದಕ ವಸ್ತು ಸರಬರಾಜು, ಮಾರಾಟ, ಬಳಕೆ, ಕಳ್ಳಸಾಗಾಣಿಕೆಯಂತಹ ಕಾನೂನು ಬಾಹಿರ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಉದ್ದೇಶದಿಂದ, ಬೇರೆ ಬೇರೆ ಇಲಾಖೆಗಳ ಸಮನ್ವಯತೆ ಸಾಧಿಸಲು ನ್ಯಾಷನಲ್ ಡ್ರಗ್ಸ್‌ಕಂಟ್ರೋಲ್ ಬ್ಯೂರೋ, ಡೈರೆಕ್ಟರೇಟ್ ಅಫ್ ರೆವಿನ್ಯೂ ಇಂಟಲಿಜೆನ್ಸ್, ವಿದೇಶಿ ನೊಂದಣಾಧಿಕಾರಿ, ಸೀಮಾ ಸುಂಕ, ಶಿಕ್ಷಣ & ರೈಲ್ವೆ ಇಲಾಖೆಯ ಉನ್ನತ ಅಧಿಕಾರಿಗಳ ಸಮನ್ವಯ ಸಭೆಯನ್ನು ಏರ್ಪಡಿಸಿ, ಡ್ರಗ್ಸ್ ಕಳ್ಳಸಾಗಾಣಿಕೆ, ಮಾರಾಟ ಪ್ರಕರಣಗಳ ಪತ್ತೆಗೆ ಸಮನ್ವಯತೆಯಿಂದ ಕಾರ್ಯಾಚರಣೆ ಕೈಗೊಳ್ಳುವ ವ್ಯವಸ್ಥೆಯನ್ನು ಮಾಡಲಾಗಿರುತ್ತದೆ.
- ಈ ಹಿಂದೆ ಡ್ರಗ್ಸ್ ಅಪರಾಧಗಳಲ್ಲಿ ಭಾಗಿಯಾಗಿರುವ ರೂಢೀಕೃತ ಆಸಾಮಿಗಳ ಚಟುವಟಿಕೆಗಳ ಮೇಲೆ ತೀವ್ರ ನಿಗಾವಣೆಯಲ್ಲಿಡಲಾಗಿದೆ. ಜೊತೆಗೆ ಅಂತರಾಜ್ಯ ಡ್ರಗ್ಸ್ ಆರೋಪಿಗಳ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಅವರ ಮೇಲೆ ನಿಗಾ ಇಡಲಾಗಿದೆ.
- ಬೆಂಗಳೂರು ನಗರ ಪೊಲೀಸರು ಪ್ರಥಮ ಬಾರಿಗೆ ಅಂತರ್ಜಾಲ (Dark Web) ಮುಖಾಂತರ ನೆದರ್‌ಲೆಂಡ್, ಕೆನಡಾ ಮುಂತಾದ ವಿದೇಶಗಳಿಂದ ಹಲವು ಮಾಧರಿಯ ಡ್ರಗ್ಸ್‌ಗಳನ್ನು ಕೊರಿಯರ್ / ರಿಜಿಸ್ಟರ್ ಅಂಚೆ ಮುಖಾಂತರ ನಗರಕ್ಕೆ ತರಿಸುತ್ತಿದ್ದ ಡ್ರಗ್ಸ್ ಜಾಲವನ್ನು ಪತ್ತೆ ಮಾಡಿ, ಅಪಾರ ಪ್ರಮಾಣದ ವಿವಿಧ ಡ್ರಗ್ಸ್‌ಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ.
- ಈ ಜಾಲದಲ್ಲಿ ಭಾಗಿಯಾಗಿದ್ದ ಅಂಚೆ ಇಲಾಖೆ ನೌಕರರನ್ನು ದಸ್ತಗಿರಿ ಮಾಡಿ ಕಾನೂನು ಕ್ರಮಕ್ಕೊಳಪಡಿಸಲಾಗಿದೆ.
- ವಿದೇಶಗಳಿಂದ ಪ್ರವಾಸಿ, ಶೈಕ್ಷಣಿಕ ವೀಸಾಗಳಲ್ಲಿ ಬರುವ ಕೆಲವು ವ್ಯಕ್ತಿಗಳು ಡ್ರಗ್ಸ್ ಮಾರಾಟದಲ್ಲಿ ತೊಡಗಿದ್ದ ವಿದೇಶಿ ಪ್ರಜೆಯನ್ನು PITNDPS ಕಾಯಿದೆ ಅಡಿಯಲ್ಲಿ ಬಂಧನ ಆಜ್ಞೆಯನ್ನು ಹೊರಡಿಸಲಾಗಿದ್ದು, ಇದು ಕರ್ನಾಟಕ ರಾಜ್ಯದಲ್ಲಿ PITNDPS-1988 ಕಾಯಿದೆ ಅಡಿಯಲ್ಲಿ ಬಂಧನ ಆದೇಶ ಜಾರಿಗೊಳಿಸಿದ ಪ್ರಥಮ ಪ್ರಕರಣವಾಗಿದ್ದು, ಕರ್ನಾಟಕ ಉಚ್ಚ ನ್ಯಾಯಾಲಯದ ಸಲಹಾ ಮಂಡಳಿಯು ವಿದೇಶಿ ವ್ಯಕ್ತಿಯ ಬಂಧನದ ಆದೇಶವನ್ನು ಪುರಸ್ಕರಿಸಿರುತ್ತದೆ.
- ಡ್ರಗ್ಸ್ ನಿಯಂತ್ರಣಕ್ಕೆ ಸಾರ್ವಜನಿಕ ಸಹಭಾಗಿತ್ವ ಪಡೆಯಲು ಸಾರ್ವಜನಿಕರ ಡ್ರಗ್ಸ್ ಅಕ್ರಮಗಳ ಬಗ್ಗೆ ರಹಸ್ಯ ಮಾಹಿತಿಗಳನ್ನು ನೀಡಲು ಶುಲ್ಕ ರಹಿತ ದೂರವಾಣಿ ಸಂಖ್ಯೆ1908ಅನ್ನು ಪ್ರಾರಂಭಿಸಲಾಗಿದೆ. ಇದರಿಂದ ಸಾರ್ವಜನಿಕರು ಮುಕ್ತವಾಗಿ ಡ್ರಗ್ಸ್ ಸರಬರಾಜು, ಮಾರಾಟ, ಬಳಕೆಗಳ ಕುರಿತು ಪೊಲೀಸರಿಗೆ ಹೆಚ್ಚು ಹೆಚ್ಚು ಮಾಹಿತಿಗಳನ್ನು ನೀಡುವುದಕ್ಕೆ ಅವಕಾಶವಾಗಿರುತ್ತದೆ.
- ಶಾಲಾ ಕಾಲೇಜುಗಳು, ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳು, ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲು ಹಾಗೂ ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಸೇವನೆ ವಿರುದ್ದಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.
- ಮಾದಕ ದ್ರವ್ಯದ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಶಾಲಾ-ಕಾಲೇಜುಗಳಲ್ಲಿ ಡ್ರಗ್ ಅವೇರ್‌ನೆಸ್ ಪ್ರೋಗ್ರಾಮ್‌ಅನ್ನು ನಡೆಸಿ, ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

- ಠಾಣಾ ಸರಹದ್ದಿನ ಬೀಟ್ ಮತ್ತು ಸಬ್-ಬೀಟ್‌ಗಳಲ್ಲಿ ಆಗ್ಗಿಂದಾಗ್ಗೆ ಸಭೆಯನ್ನು ನಡೆಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿಗಳಿಗೆ ಉಪನ್ಯಾಸದ ಮೂಲಕ ವಿವರವಾಗಿ ತಿಳುವಳಿಕೆ ನೀಡಲಾಗುತ್ತಿದೆ.
- ವಿದ್ಯಾರ್ಥಿಗಳು ಮತ್ತು ಯುವ ಸಮೂಹವು ಮಾದಕ ವಸ್ತುಗಳ ದುಷ್ಚಟಕ್ಕೆ ಬಲಿಯಾಗದಂತೆ ಶಾಲಾ ಕಾಲೇಜುಗಳ ಬಳಿ ಗಸ್ತು ವಾಹನಗಳಿಂದ ವಿಶೇಷವಾಗಿ ಗಸ್ತು ನಡೆಸಿ ಸ್ಥಳೀಯ ಪೊಲೀಸ್ ಅಧಿಕಾರಿ/ಸಿಬ್ಬಂದಿಗಳು ಆಯಾ ಶಾಖೆಗಳಿಗೆ ಹೋಗಿ ಮಾದಕ ವಸ್ತುಗಳ ದುಷ್ಪರಿಣಾಮದ ಬಗ್ಗೆ ಅರಿವು ಮೂಡಿಸಲಾಗುತ್ತಿದೆ ಹಾಗೂ ಮಾದಕ ವಸ್ತು ಸಾಗಣೆ ಹಾಗೂ ಮಾರಾಟ ಮಾಡುವವರ ವಿರುದ್ಧ ನಿಗಾ ವಹಿಸಲಾಗುತ್ತಿದೆ.
- ಜನ ಸಾಮಾನ್ಯರಲ್ಲಿ ಮಾದಕ ವಸ್ತುಗಳ ವಿರುದ್ಧ ಅರಿವು ಮೂಡಿಸುವ ಸಲುವಾಗಿ ಬಿತ್ತಿ ಪತ್ರಗಳನ್ನು, ಸಿನಿಮಾ ಮಂದಿರಗಳಲ್ಲಿ ಸ್ಲೈಡ್ ಶೋ, ಸುದ್ದಿ ಮಾಧ್ಯಮಗಳಲ್ಲಿ ಮಾದಕ ವಸ್ತುಗಳ ಬಳಕೆ ವಿರುದ್ಧ ಸಂದೇಶಗಳನ್ನು ಪ್ರಕಟಿಸುವುದು, ಹೀಗೆ ಜನಸಾಮಾನ್ಯರಲ್ಲಿ ಅರಿವು ಮೂಡಿಸಲಾಗುತ್ತಿದೆ.
- 2015ನೇ ಸಾಲಿನಲ್ಲಿ ಒಬ್ಬ ಅಪರಾಧಿ, 2018 ರಲ್ಲಿ ಮೂವರು ಅಪರಾಧಿಗಳ ಮೇಲೆ ಮಾದಕ ವಸ್ತುಗಳ ಬಳಕೆ ಹಾಗೂ ಸಾಗಾಣಿಕೆ ಪ್ರಕರಣಗಳಲ್ಲಿ ಎನ್.ಡಿ.ಪಿ.ಎಸ್. ಕಾಯ್ದೆಯ ಜೊತೆಗೆ ಗೂಂಡಾ ಕಾಯ್ದೆಯನ್ನು ಚಲಾಯಿಸಿ ಕ್ರಮ ಕೈಗೊಳ್ಳಲಾಗಿದೆ.
- ವಿಶ್ವ ಸಂಸ್ಥೆಯ ನಿರ್ದೇಶನದನ್ವಯ ಪ್ರತಿ ವರ್ಷ ಆಗಸ್ಟ್ ಮತ್ತು ಸೆಪ್ಟೆಂಬರ್ ಮಾಹೆಯಲ್ಲಿ ಮಾದಕ ವಸ್ತುಗಳ ಮಾರಾಟ ಮತ್ತು ಸಾಗಣೆಯನ್ನು ತಡೆಗಟ್ಟಲು ರಾಜ್ಯಾದ್ಯಂತ ವಿಶೇಷ ಕಾರ್ಯಚರಣೆ ಕೈಗೊಳ್ಳಲಾಗುತ್ತಿದೆ. ಈ ಅವಧಿಯಲ್ಲಿ ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಮಾದಕ ವಸ್ತುಗಳ ಸೇವನೆಯಿಂದಾಗುವ ದೈಹಿಕ/ ಆರ್ಥಿಕ/ ಸಾಮಾಜಿಕ ದುಷ್ಪರಿಣಾಮಗಳ ಕುರಿತು ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.
- ಇದಲ್ಲದೆ ಸರ್ಕಾರವು ಸರ್ಕಾರದ ಆದೇಶ ಸಂಖ್ಯೆ: ಒಇ 16 ಪಿಎನ್‌ಡಿ 2018, ದಿನಾಂಕ: 27.08.2018 ರನ್ವಯ ಶಾಲಾ ಕಾಲೇಜು ಮತ್ತು ವಿಶ್ವವಿದ್ಯಾಲಯಗಳ ಹಂತದಲ್ಲಿ ಮಾದಕ ವಸ್ತುಗಳ ಬಳಕೆ ಮತ್ತು ಸಾಗಣೆ ತಡೆಗಟ್ಟಲು ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡಂತೆ **ಸಮಿತಿಯನ್ನು ರಚಿಸಿ ಕರ್ತವ್ಯ** ನಿಗಧಿಪಡಿಸಲಾಗಿದೆ.
- ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್.ಡಿ. 01 ಪಿಎನ್‌ಡಿ 2019, ದಿನಾಂಕ: 30/01/2020 ರಲ್ಲಿ ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಮತ್ತು ವಲಯ ಪೊಲೀಸ್ ಮಹಾ ನಿರೀಕ್ಷಕರುಗಳಿಗೆ ಪಿ.ಐ.ಟಿ. ಎನ್.ಡಿ.ಪಿ.ಎಸ್. ಕಾಯ್ದೆ, 1988ರ ಕಲಂ 3(1)ರಡಿಯಲ್ಲಿ ಮುಂಜಾಗ್ರತ ಕ್ರಮವಾಗಿ **ರೂಢಿಗತ ಅಪರಾಧಿಗಳನ್ನು ಬಂಧಿಸಲು ಅಧಿಕಾರ** ನೀಡಲಾಗಿದೆ.
- ಘನ ಸರ್ವೋಚ್ಚ ನ್ಯಾಯಾಲಯದ ಅಪರಾಧಿಕ ಮೇಲ್ಮನವಿ ಸಂಖ್ಯೆ: 652/2012ರಲ್ಲಿ ದಿನಾಂಕ 28/01/2016 ರ ಆದೇಶದನ್ವಯ ಡಿ.ಜಿ. & ಐ.ಜಿ.ಪಿ ರವರ ಕಛೇರಿ ಜ್ಞಾಪನ ಸಂಖ್ಯೆ: ಅಪರಾಧ-6/29/ಎಸ್.ಎಂ.ಎಸ್/2016, ದಿನಾಂಕ: 25/04/2016 ರಲ್ಲಿ ಮಾದಕ ವಸ್ತುಗಳ ಜಪ್ತಿ, ಸಂಗ್ರಹಣೆ ಮತ್ತು ವಿಲೇವಾರಿ ಕುರಿತು ಕೈಗೊಳ್ಳಬೇಕಾದ ಕ್ರಮಗಳ ವಿವರಗಳನ್ನು ಎಲ್ಲಾ ಘಟಕಾಧಿಕಾರಿಗಳಿಗೆ ನೀಡಲಾಗಿದೆ.